ಮಿಸ್ ಸಂ. ಃ **17/2017**
ಪಿ.ಡಬ್ಲ್ಯೂ ಃ **01**

ದಿನಾಂಕ ಃ **11-12-2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು ಃ- ಎದುರುದಾರರ ಪರ ಶ್ರೀ. ಎನ್.ಕೆ. ವಕೀಲರಿಂದ ಃ-**

ಯಾವ ಊರಿನಲ್ಲಿ ವಾಸ ಇರುತ್ತೀರೀ ಎಂದರೆ ಸಾಕ್ಷಿಯು ಕುರುಬರಹಳ್ಳಿ, ಜೆ.ಸಿ. ನಗರ ಬೆಂಗಳೂರು ಎಂದು ನುಡಿಯುತ್ತಾರೆ. ಆ ರೀತಿ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಜೆ.ಸಿ ನಗರ ಬೆಂಗಳೂರು ಎಂದು ಬರೆಸಿರುತ್ತೀರಾ ಎಂದರೆ ಬರೆಸಿರುತ್ತೇನೆ ಎಂದು ನುಡಿಯುತ್ತಾರೆ. ನೀವು ಆ ರೀತಿ ವಿಳಾಸವನ್ನು ಕೊಡದೇ ಸುಳ್ಳು ವಿಳಾಸವನ್ನು ನೀಡಿ ಪ್ರಮಾಣ ಪತ್ರ ಸಲ್ಲಿಸಿರುತ್ತೀರೀ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಈಗ ಸಾಕ್ಷಿಗೆ ಪ್ರಮಾಣ ಪತ್ರವನ್ನು ತೋರಿಸಿ ಸದರಿ ಪ್ರಮಾಣ ಪತ್ರವನ್ನು ನೀವೇ ನ್ಯಾಯಾಲಯಕ್ಕೆ ಹಾಕಿರುತ್ತೀರಾ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಸದರಿ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಇರುವ ವಿಷಯಗಳು ನಿಮಗೆ ಗೊತ್ತಿದೆಯೋ ಅಥವಾ ಇಲ್ಲವೋ ಎಂದರೆ ಸಾಕ್ಷಿಯು ಎಲ್ಲಾ ಗೊತ್ತಿರುತ್ತದೆ ಎಂದು ನುಡಿಯುತ್ತಾರೆ. ಸದರಿ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ಯಾರು ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ನಾನೇ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ನಿಮ್ಮ ಮುಖ್ಯ ವಿಚಾರಣೆಯಲ್ಲಿ ಬರೆದಿರುವ ತಾವರೆಕೆರೆ ಹೋಬಳಿ ಕುರುಬರ ಹಳ್ಳಿಯಲ್ಲಿ ವಾಸ ಸಇರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ನೀವು ಮದುವೆ ಆದಾಗಿನಿಂದ ಬೆಂಗಳೂರು ಕುರುಬರಹಳ್ಳಿಯಲ್ಲಿ ವಾಸ ಇರುವುದು ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ನೀವು ಮದುವೆ ಆದ ನಂತರ ವರ್ತೂರು ನಲ್ಲಿ ವಾಸ ಇರುವುದಿಲ್ಲ ಕುರುಬರಹಳ್ಳಿಯಲ್ಲಿ ವಾಸ

ಇರುತ್ತೀರೀ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ನೀವು ಉಳಿದ ಅರ್ಜಿದಾರರ ಪರವಾಗಿ ಸೇರಿ ಪ್ರಮಾಣ ಪತ್ರ ಸಲ್ಲಿಸಿರುತ್ತೀರಾ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಉಳಿದ ಎದುರುದಾರರು ನಿಮಗೆ ಅಧಿಕಾರ ಪತ್ರವನ್ನು ಕೊಟ್ಟಿರುತ್ತಾರಾ ಎಂದರೆ ಸಾಕ್ಷಿಯು ನಾನೇ ಅಧಿಕಾರ ಪತ್ರವನ್ನು ತೆಗೆದುಕೊಂಡು ಸಲ್ಲಿಸಿರುತ್ತೇನೆ ಎಂದು ನುಡಿಯುತ್ತಾರೆ. ನೀವು ಹಾಜರುಪಡಿಸಿರುವ ದಾಖಲೆಗಳನ್ನು ಅಧಿಕಾರ ಪತ್ರ ಎಲ್ಲಿ ಇರುತ್ತದೆ ಎಂದರೆ ಸಾಕ್ಷಿಯು ನನಗೆ ಓದಲು ಬರುವುದಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರಿದು ದಾಖಲೆ ಇರುವುದಿಲ್ಲ ಎಂದು ನುಡಿಯುತ್ತಾರೆ.

ಮರ ಕಡಿಯಬಾರದು ಎಂದು ಆದೇಶ ವಾಗಿರುತ್ತದೆ ಎಂದು ಹೇಳಿದ್ದು ಸದರಿ ಆದೇಶದ ಪ್ರತಿಯನ್ನು ನ್ಯಾಯಾಲಯಕ್ಕೆ ಕೊಟ್ಟಿರುತ್ತೀರಾ ಎಂದರೆ ಸಾಕ್ಷಿಯು ಎಲ್ಲಾ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಈಗ ಸಾಕ್ಷಿಗೆ ದಾಖಲೆಗಳನ್ನು ತೋರಿಸಲಾಗಿ ಸದರಿ ಆದೇಶದ ಪ್ರತಿ ಇದೇಯೇ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಸದರಿ ಆದೇಶವು ನ್ಯಾಯಾಲಯದಲ್ಲಿ ಯಾವ ದಿನಾಂಕ ಆಗಿರುತ್ತದೆ ಎಂದರೆ ಸಾಕ್ಷಿಯು 2017 ರಲ್ಲಿ ಎಂದು ನುಡಿಯುತ್ತಾರೆ. ಕೇಸ್ ನಂಬರ್ ಯಾವುದು ಎಂದರೆ ಸಾಕ್ಷಿಯು 30/2004 ಎಂದು ನುಡಿಯುತ್ತಾರೆ. ಯಾವ ಸರ್ ವೆ ನಂಬರ್ ನಲ್ಲಿ ಮರ ಕಡಿದಿರುತ್ತಾರೆಎಂದರೆ ಸಾಕ್ಷಿಯು ಸರ್ವೆ ನಂ.36/4 ಎಂದು ನುಡಿಯುತ್ತಾರೆ. ನಿಮ್ಮ ಮುಖ್ಯ ವಿಚಾರಣೆಯಲ್ಲಿ ಸರ್ವೆ ನಂಬರ್ ಹಾಗೂ ವಿಸ್ತೀರ್ಣ ಬರೆಸಿರುತ್ತೀರಾ ಎಂದರೆ ಸಾಕ್ಷಿಯು ಬರೆಸಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ಸರ್ವೆ ನಂಬರ್ ನಲ್ಲಿ ಯಾವ ಯಾವ ಭಾಗದಲ್ಲಿ ಮರಗಳು ಇದ್ದವು ಹಾಗೂ ಚಕ್ ಬಂಧಿ ಹೇಳಿರುತ್ತೀರಾ ಎಂದರೆ ಸಾಕ್ಷಿಯು ಸಾಕ್ಷಿಯು ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ನಿಮ್ಮ ಅರ್ಜಿಯಲ್ಲಿ ಹಾಗೂ ಪ್ರಮಾಣಪತ್ರದಲ್ಲಿ ಯಾವ

ಯಾವ ಮರಗಳು ಇದ್ದವು ಹಾಗೂ ಚಕ್ ಬಂಧಿ ಹೇಳಿರುವುದಿಲ್ಲ ಎಂದರೆ ಸಾಕ್ಷಿಯು ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ದಾವೆಯನ್ನು ಹಾಕುವ ಸಂದರ್ಬದಲ್ಲಿ ಪಹಣಿಗಳು ಯಾರ ಹೆಸರಿನಲ್ಲಿ ಇದ್ದವು ಎಂದರೆ ಸಾಕ್ಷಿಯು ವೆಂಕಟಾಚಲಯ್ಯ ರವರ ಹೆಸರಿನಲ್ಲಿ ಇದ್ದವು ಎಂದು ನುಡಿಯುತ್ತಾರೆ. ಸದರಿ ವೆಂಕಟಾಚಲಯ್ಯ ರವರೇ ಇಲ್ಲಿಯಾವರೆಗೂ ಸ್ವಾಧೀನದಲ್ಲಿ ಇದ್ದಾರೆ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಸದರಿ ವಿಚಾರವು ನಿಮಗೂ ಗೊತ್ತಿರುತ್ತದೇ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಹುಣಸೇ ಮರ ಇತ್ತು ಎಂದು ಪ್ರಮಾಣ ಪತ್ರದಲ್ಲಿ ಹೇಳಿದ್ದು ಅ ಸಂಬಂಧ ಪೋಟೋ ಅಥವಾ ವಿಡಿಯೋ ಹಾಜರುಪಡಿಸಿರುತ್ತೀರಾ ಎಂದರೆ ಸಾಕ್ಷಿಯು ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಆ ರೀತಿ ಪೂರ್ತಿ ಮರ ಇರುವ ಬಗ್ಗೆ ಪೋಟೋಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸಾಕ್ಷಿಯು ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ತಾವು ಹಾಜರುಪಡಿಸಿರುವ ದಾಖಲೆಗಳಲ್ಲಿ ಹುಣಸೇ ಮರ ಇದ್ದ ಬಗ್ಗೆ ದಾಖಲೆಗಳು ಇರುವುದಿಲ್ಲ ಎಂದರೆ ಸಾಕ್ಷಿಯು ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ.

ಯಾವ ಕಡೆ ಹುಣಸೆ ಮರ ಇರುತ್ತದೆ ಎಂದು ಅರ್ಜಿಯಲ್ಲಿ ಹಾಗೂ ಪ್ರಮಾಣ ಪತ್ರದಲ್ಲಿ ಹೇಳಿರುತ್ತೀರಾ ಎಂದರೆ ಸಾಕ್ಷಿಯು ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ಯಾವ ಕಡೆ ಇರುತ್ತದೆ ಎಂದರೆ ಸಾಕ್ಷಿಯು ನಂಧೀ ಬಾಗಿಲು ಎಂದು ನುಡಿಯುತ್ತಾರೆ. ಯಾವ ದಿನಾಂಕದಂದು ಮರ ಕಡಿದಿರುತ್ತಾರೆ ಎಂದು ಅರ್ಜಿಯಲ್ಲಿ ಹಾಗೂ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಹೇಳಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಮರವನ್ನು ಕಡಿಯುವ ಸಮಯದಲ್ಲಿ ಯಾರು ಯಾರು ಇದ್ದರು ಎಂದು ಹೇಳಿರುತ್ತೀರಾ ಎಂದರೆ ಸಾಕ್ಷಿಯು ಹೇಳಿರುತ್ತೇನೆ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರಿದು 4-

**ಮಿಸ್ ಸಂ. : 17/2017**
**ಪಿ.ಡಬ್ಲ್ಯೂ : 01**

5 ಜನರು ಇದ್ದರು ಆದರೆ ನಮ್ಮ ಅಣ್ಣ ವೆಂಕಟಾಚಲಯ್ಯ ರವರು ಇದ್ದಿರಲಿಲ್ಲ ಎಂದು ನುಡಿಯುತ್ತಾರೆ. ಸದರಿ 4-5 ಜನರ ಹೆಸರನ್ನು ಪ್ರಮಾಣ ಪತ್ರದಲ್ಲಿ ಹೇಳಿರುತ್ತೀರಾ ಎಂದರೆ ಸಾಕ್ಷಿಯು ಹೇಳಿರುತ್ತೇನೆ ಎಂದು ನುಡಿಯುತ್ತಾರೆ.

ನೀವು ಹಾಜರುಪಡಿಸಿರುವ ಪೋಟೋ ಐಟಂ ನಂಬರ್ 2ರ ಸ್ವತ್ತಿಗೆ ಸಂಬಂದಪಟ್ಟಿರುವುದಿಲ್ಲ ಎಂದರೆ ಸಾಕ್ಷಿಯು ಸುಳ್ಳು ಎಂದು ನುಡಿಯುತ್ತಾರೆ. ಸದರಿ ಪೋಟೋವನ್ನು ಯಾವ ದಿನಾಂಕ ಹಾಗೂ ಸಮಯದಂದು ತೆಗೆದಿರುತ್ತದೆ ಎಂದು ನಮೂದೂ ಆಗಿರುತ್ತದೆಯೇ ಎಂದರೆ ಸಾಕ್ಷಿಯು ಅದು ನನಗೆ ಗೊತ್ತಾಗುವುದಿಲ್ಲ ಎಂದು ನುಡಿಯುತ್ತಾರೆ. ನಿಪಿ-1 ಮತ್ತು ನಿಪಿ-2ರಲ್ಲಿ ದಿನಾಂಕ ಹಾಗೂ ಸಮಯ ನಮೂದು ಆಗಿರುವುದಿಲ್ಲ ಎಂದರೆ ಸಾಕ್ಷಿಯು ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

**ಈ ಹಂತದಲ್ಲಿ ಮುಂದುವರಿದ ಪಾಟೀ ಸವಾಲಿಗೇ ಮುಂದೂಡಲಾಯಿತು.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಪ್ರ. ಸಿ. ಜ. ಮತ್ತು ಜೆ. ಎಂ. ಎಫ್? ಸಿ. ಮಾಗಡಿ.**